ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.662/2014

| | |
|---|---|
| ಸಿ.ಡಬ್ಲ್ಯೂ : | 9 |
| ಪಿ.ಡಬ್ಲ್ಯೂ : | 5 |

| | | |
|---|---|---|
| ಸಾಕ್ಷಿದಾರರ ಹೆಸರು | : | ಶ್ರೀ ಶಿವಮಂಜು |
| ತಂದೆ/ ಪತಿಯ ಹೆಸರು | : | ಗುರುಸಿದ್ದಯ್ಯ |
| ವಯಸ್ಸು | : | 62 ವರ್ಷ |
| ವೃತ್ತಿ | : | ನಿವೃತ್ತ ನೌಕರರು |
| ವಾಸ | : | ಮಂಡ್ಯ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 05.11.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು 2011 ನೇ ಇಸವಿಯಿಂದ 2015 ನೇ ಇಸವಿಯವರೆಗೆ ರಿಂದ ಅರಕೆರೆ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:15.09.2014 ರಂದು ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಸಂಜೆ 05.45 ಗಂಟೆ ಸಮಯದಲ್ಲಿ ಚಾಸಾ.1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ನನ್ನ ಸಮಕ್ಷಮ ಹಾಜರು ಪಡಿಸಿದ್ದು, ಸದರಿ ದೂರಿನ ಸಾರಾಂಶದ ಮೇಲಿಂದ ಅಪರಾಧ ಸಂಖ್ಯೆ 177/2014 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ದೂರನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ

ಈಗ ಪ್ರ.ವ.ವರದಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ನಂತರ ದಿನಾಂಕ 16.09.2014 ರಂದು ತನಿಖೆಯನ್ನು ಮುಂದುವರೆಸಿ ಚಾಸಾ.1 ರವರು ಸ್ಥಳವನ್ನು ತೋರಿಸಿ ಮೇರೆಗೆ ಘಟನಾ ಸ್ಥಳಕ್ಕೆ ಬೇಟಿ ನೀಡಿ ಪಂಚರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಬೆಳಗ್ಗೆ 9.30 ಗಂಟೆಯಿಂದ 10.00 ಗಂಟೆಯವರೆಗೆ ಜರುಗಿಸಿರುತ್ತೇನೆ. ಮಹಜರ್ ಕಾಲದಲ್ಲಿ ಒಂದು ಕಾಡು ಮರದ ದೊಣ್ಣೆ, ಗುದ್ದಲಿ ಕಾವು, ಒಂದು ಕಬ್ಬಿಣದ ರಾಡು, ಒಂದು ಬಿಳಿ ಬಣ್ಣದ ಟೀ ಶರ್ಟ್, ಒಂದು ಟವಲ್ ಹಾಗೂ ಒಂದು ಬಿಳಿ ಬನಿಯನ್ ಅನ್ನು ವಶಪಡಿಸಿಕೊಂಡು ಅವುಗಳಿಗೆ ಸಂಬಂಧಿಸಿದಂತೆ ಸ್ವತ್ತು ಪಟ್ಟಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ನಂತರ ಅದೇ ದಿನ ಚಾಸಾ.2 ರಿಂದ 4 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.2 ಮತ್ತು 3 ರವರ ಹೇಳಿಕೆಯನ್ನು ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-5 ಮತ್ತು 6 ಎಂದು, ಅವುಗಳಲ್ಲಿ ಇರುವ ಸಾಕ್ಷಿಯ ಸಹಿಗಳನ್ನು ಕ್ರಮವಾಗಿ ನಿಪಿ-5(ಎ) ಮತ್ತು 6(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಚಾಸಾ.4 ರವರ ಹೇಳಿಕೆಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಂತರ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಿ.ಎಸ್.ಐ ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ದೂರನ್ನು ನನ್ನ ಮುಂದೆ ಬರೆದಿರುವುದಿಲ್ಲ. ದೂರನ್ನು ನೀಡಲು ದೂರುದಾರರು ಒಬ್ಬರೇ ಬಂದಿದ್ದರು. ಪಂಚರರಿಗೆ ನಾನು ನೋಟೀಸ್ ನೀಡಿರುತ್ತೇನೆ. ಮುದ್ದೆ ಮಾಲುಗಳನ್ನು ಚಾಸಾ.1 ರವರು ನನ್ನ ಸಮಕ್ಷಮ ಹಾಜರುಪಡಿಸಿರುತ್ತಾರೆ. ನಾನು ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಬೇಟಿ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಮ್ಮ ಠಾಣೆಯ ಅಂಕಿ ಅಂಶವನ್ನು ತೋರಿಸುವ ಸಲುವಾಗಿ ದೂರುದಾರರಿಗೆ ಅನುಕೂಲವಾಗಲಿ ಎಂದು ಸುಳ್ಳು ದೂರನ್ನು

ಪಡೆದುಕೊಂಡು ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.